ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/34/ಇಸಿಎಸ್(3)/2020

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001
ದೂ.ಸಂ:080-22200777
ದಿನಾಂಕ: 04.08.2020.

ಜ್ಞಾಪನ

ವಿಷಯ: ಸಕಾಲ ಮತ್ತು ಸೇವಾ ಸಿಂಧು ಅಡಿಯಲ್ಲಿ ರಾಜ್ಯದ ವಿವಿಧ ಪಾಲಿಟೆಕ್ನಿಕ್‌ಗಳಲ್ಲಿ ಅರ್ಜಿಗಳು ವಿಲೇವಾರಿಯಾಗದೆ ಉಳಿದಿರುವ ಬಗ್ಗೆ.

*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ, ರಾಜ್ಯದ ಸರ್ಕಾರಿ/ ಅನುದಾನಿತ/ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಹಲವಾರು ಸಕಾಲ/ ಸೇವಾ ಸಿಂಧು ಅರ್ಜಿಗಳು ಕಾಲೇಜು ಹಂತದಲ್ಲಿಯೇ ಬಾಕಿ ಉಳಿದಿರುವ ಬಗ್ಗೆ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಈ ಮೂಲಕ ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರಿಗೆ ತಿಳಿಸುವುದೇನೆಂದರೆ, ತಕ್ಷಣವೇ ಸಕಾಲ/ ಸೇವಾ ಸಿಂಧು ಅಡಿಯಲ್ಲಿ ಬಂದಿರುವ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಮುಂದಿನ ಕ್ರಮಕ್ಕಾಗಿ ಕೇಂದ್ರ ಕಛೇರಿಗೆ ಕಳುಹಿಸಿಕೊಡಲು ಈ ಮೂಲಕ ಸೂಚಿಸಲಾಗಿದೆ.

ಪ್ರಾಂಶುಪಾಲರು ಸಕಾಲ/ ಸೇವಾ ಸಿಂಧು ಅಡಿಯಲ್ಲಿ ಬರುವ ಅರ್ಜಿಗಳ ಬಗ್ಗೆ ವೈಯಕ್ತಿಕ ಗಮನ ಹರಿಸಿ, ಸಂಬಂಧಪಟ್ಟ ವಿಷಯ ನಿರ್ವಾಹಕರು ಅರ್ಜಿಗಳನ್ನು ಕ್ಲುಪ್ತ ಸಮಯದಲ್ಲಿ ವಿಲೇ ಮಾಡುವ ಬಗ್ಗೆ ಕ್ರಮ ಜರುಗಿಸಬೇಕೆಂದು ಸೂಚಿಸಲಾಗಿದೆ. ಸಕಾಲ/ ಸೇವಾ ಸಿಂಧು ಅಡಿಯಲ್ಲಿ ಅರ್ಜಿಗಳನ್ನು ಕ್ಲುಪ್ತ ಸಮಯದಲ್ಲಿ ನಿಯಮಾನುಸಾರ ಮುಂದಿನ ಕ್ರಮಕ್ಕೆ ಕಳುಹಿಸುವಲ್ಲಿ ತಡ ಮಾಡಿದ್ದಲ್ಲಿ, ಅಂತಹ ಸಂಸ್ಥೆಯ/ ಸಂಸ್ಥೆಗಳ ಪ್ರಾಂಶುಪಾಲರು ಹಾಗೂ ವಿಷಯ ನಿರ್ವಾಹಕರ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಎಚ್ಚರಿಕೆ ನೀಡಲಾಗಿದೆ.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಲಗತ್ತು: ಸರ್ಕಾರದಿಂದ ಬಂದ ಬಾಕಿ ಇರುವ ಸಕಾಲ/ ಸೇವಾಸಿಂಧು ಅರ್ಜಿಗಳ Excell File

ಇವರಿಗೆ: ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ – ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ :
1. ಆಯುಕ್ತರ ಆಪ್ತಶಾಖೆ – ಮಾಹಿತಿಗಾಗಿ
2. ನಿರ್ದೇಶಕರ ಆಪ್ತಶಾಖೆ – ಮಾಹಿತಿಗಾಗಿ
3. ಇ-ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
4. ಕಾರ್ಯದರ್ಶಿಯವರ ಆಪ್ತಶಾಖೆ - ಮಾಹಿತಿಗಾಗಿ